**All India Radio: Bangalore**
**National Bulletins In Kannada**
**01.07.2025 / 19.35 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**01.07.2025 / 19.35 hrs**
**<><*<><>*><>**

<u>ಮುಖ್ಯಾಂಶಗಳು</u>

೧. ಒಂದು ಲಕ್ಷ ಕೋಟಿ ರೂಪಾಯಿಗಳ ಉದ್ಯೋಗ ಸಂಬಂಧಿತ ಪ್ರೋತ್ಸಾಹಕ ಯೋಜನೆಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ

೨. ’ರೈಲ್ ಒನ್’ ಆಪ್ ಬಿಡುಗಡೆಗೊಳಿಸಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್

೩. ತಮಿಳುನಾಡಿನ ವಿರುದುನಗರದ ಪಟಾಕಿ ಕಾರ್ಖಾನೆಯಲ್ಲಿ ಸ್ಫೋಟ; ಕನಿಷ್ಠ ೮ ಕಾರ್ಮಿಕರು ಸಾವು

೪. ಏಷ್ಯನ್ ಯೂತ್ ಚಾಂಪಿಯನ್‌ಶಿಪ್; ಟೇಬಲ್ ಟೆನಿಸ್ ಸ್ಪರ್ಧೆಯ ೧೫ ವರ್ಷದೊಳಗಿನ ಬಾಲಕಿಯರ ಸಿಂಗಲ್ಸ್‌ನಲ್ಲಿ ಭಾರತದ ದಿವ್ಯಾಂಶಿ ಭೌಮಿಕ್‌ಗೆ ಚಿನ್ನ

**<><*<><>*><>**

ದೇಶದಲ್ಲಿ ಉದ್ಯೋಗ ಸೃಷ್ಟಿಯನ್ನು ಹೆಚ್ಚಿಸಲು ಸುಮಾರು ಒಂದು ಲಕ್ಷ ಕೋಟಿ ರೂಪಾಯಿಗಳ ಉದ್ಯೋಗ-ಸಂಬಂಧಿತ ಪ್ರೋತ್ಸಾಹಕ ಯೋಜನೆಗೆ ಕೇಂದ್ರ ಸಚಿವ ಸಂಪುಟ ಇಂದು ಅನುಮೋದನೆ ನೀಡಿದೆ. ಎರಡು ವರ್ಷಗಳ ಅವಧಿಯಲ್ಲಿ ದೇಶದಲ್ಲಿ ೩.೫ ಕೋಟಿಗೂ ಹೆಚ್ಚು ಉದ್ಯೋಗಗಳ ಸೃಷ್ಟಿಯನ್ನು ಉತ್ತೇಜಿಸುವ ಗುರಿಯನ್ನು ಈ ಯೋಜನೆ ಹೊಂದಿದೆ. ಈ ಪೈಕಿ ೧.೯೨ ಕೋಟಿ ಫಲಾನುಭವಿಗಳು ಮೊದಲ ಬಾರಿಗೆ ಉದ್ಯೋಗಕ್ಕೆ ಸೇರ್ಪಡೆಯಾಗುತ್ತಾರೆ. ಈ ಕುರಿತು ನವದೆಹಲಿಯಲ್ಲಿ ಇಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ಮೊದಲ ಬಾರಿಗೆ ಕೆಲಸ ಮಾಡುವವರಿಗೆ ಈ ಯೋಜನೆಯಡಿಯಲ್ಲಿ ೧೫ ಸಾವಿರ ರೂಪಾಯಿಗಳವರೆಗೆ ಒಂದು ತಿಂಗಳ ವೇತನ ಸಿಗಲಿದೆ. ಹೆಚ್ಚುವರಿ ಉದ್ಯೋಗ ಸೃಷ್ಟಿಸಲು ಉದ್ಯೋಗದಾತರಿಗೆ ಎರಡು ವರ್ಷಗಳವರೆಗೆ ಪ್ರೋತ್ಸಾಹಕ ನೀಡಲಾಗುವುದು ಮತ್ತು ಉತ್ಪಾದನಾ ವಲಯಕ್ಕೆ ಇನ್ನೂ ಎರಡು ವರ್ಷಗಳವರೆಗೆ ವಿಸ್ತೃತ ಪ್ರಯೋಜನಗಳನ್ನು ನೀಡಲಾಗುವುದು ಎಂದು ಹೇಳಿದರು. ಕನಿಷ್ಠ ಆರು ತಿಂಗಳ ಕಾಲ ನಿರಂತರ ಉದ್ಯೋಗ ಹೊಂದಿರುವ ಪ್ರತಿ ಹೆಚ್ಚುವರಿ ಉದ್ಯೋಗಿಗೆ ಎರಡು ವರ್ಷಗಳವರೆಗೆ ತಿಂಗಳಿಗೆ ಮೂರು ಸಾವಿರದವರೆಗೆ ಉದ್ಯೋಗದಾತರಿಗೆ ಪ್ರೋತ್ಸಾಹಕ ನೀಡಲು ಸರ್ಕಾರ ನಿರ್ಧರಿಸಿದೆ ಎಂದರು. ಇದೇ ವೇಳೆ ಕೇಂದ್ರ ಸಚಿವ ಸಂಪುಟವು ಒಂದು ಲಕ್ಷ ಕೋಟಿ ರೂಪಾಯಿಗಳ ನಿಧಿಯೊಂದಿಗೆ ಸಂಶೋಧನಾ ಅಭಿವೃದ್ಧಿ ಮತ್ತು ನಾವೀನ್ಯತೆ ಯೋಜನೆಗೆ ಅನುಮೋದನೆ ನೀಡಿದೆ. ದೇಶದ ಸಂಶೋಧನೆ ಮತ್ತು ನಾವೀನ್ಯತೆ ಪರಿಸರ ವ್ಯವಸ್ಥೆಯನ್ನು ಬಲಪಡಿಸಲು ಖಾಸಗಿ ವಲಯದ ಹೂಡಿಕೆಯನ್ನು ಉತ್ತೇಜಿಸಲು ದೀರ್ಘಾವಧಿಯ ಹಣಕಾಸು ಅಥವಾ ಮರುಹಣಕಾಸು ಒದಗಿಸುವ ಗುರಿಯನ್ನು ಈ ಯೋಜನೆ ಹೊಂದಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಹೇಳಿದರು.

**ಧ್ವನಿ: ಅಶ್ವಿನ ವೈಷ್ಣವ್ ( ೩೨ ಸೆಕೆಂಡ್ಸ್)**

ಕ್ರೀಡೆಯನ್ನು ಬೆಂಬಿಸಲು ಮತ್ತು ನಾಗರಿಕರನ್ನು ಕ್ರೀಡಾ ಚಟುವಟಿಕೆಗಳೊಂದಿಗೆ ಸಬಲೀಕರಣಗೊಳಿಸಲು ರಾಷ್ಟ್ರೀಯ ಕ್ರೀಡಾ ನೀತಿ ೨೦೨೫ ಅನ್ನು ಸಹ ಅನುಮೋದಿಸಲಾಗಿದೆ. ತರಬೇತಿ, ಮತ್ತು ಸಮಗ್ರ ಬೆಂಬಲಕ್ಕಾಗಿ ವಿಶ್ವ ದರ್ಜೆಯ ವ್ಯವಸ್ಥೆಗಳನ್ನು ನಿರ್ಮಿಸುವುದು ಈ ನೀತಿಯ ಪ್ರಮುಖ ಉದ್ದೇಶಗಳಲ್ಲಿ ಒಂದಾಗಿದೆ ಎಂದು ಅವರು ಮಾಹಿತಿ ನೀಡಿದರು. ತಮಿಳುನಾಡಿನಲ್ಲಿ ಒಂದು ಸಾವಿರದ ೮೫೩ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಪರಮಕುಡಿ-ರಾಮನಾಥಪುರಂ ವಿಭಾಗದ ನಾಲ್ಕು ಪಥಗಳ ನಿರ್ಮಾಣಕ್ಕೆ ಕೇಂದ್ರ ಸಚಿವ ಸಂಪುಟವು ಅನುಮೋದನೆ ನೀಡಿದೆ. ಯೋಜನೆಯು ಒಟ್ಟು ಉದ್ದ ೪೬.೭ ಕಿಲೋಮೀಟರ್ ಆಗಿದ್ದು, ಇದು ರಾಮೇಶ್ವರಂ ಮತ್ತು ಧನುಷ್ಕೋಡಿಗೆ ಪ್ರವಾಸೋದ್ಯಮವನ್ನು ಉತ್ತೇಜಿಸುತ್ತದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

**<><*<><>*><>**

ಪ್ರಧಾನಿ ನರೇಂದ್ರ ಮೋದಿ, ನಾಳೆಯಿಂದ ಘಾನಾ, ಟ್ರಿನಿಡಾಡ್ ಮತ್ತು ಟೊಬಾಗೊ, ಅರ್ಜೆಂಟಿನಾ, ಬ್ರೆಜಿಲ್ ಹಾಗೂ ನಮಿಬಿಯಾಗೆ ಐದು ರಾಷ್ಟ್ರಗಳ ಭೇಟಿ ಆರಂಭಿಸಲಿದ್ದಾರೆ. ಪ್ರಧಾನಿಯವರು ತಮ್ಮ ಐದು ರಾಷ್ಟ್ರಗಳ ಪ್ರವಾಸದ ಮೊದಲ ಚರಣದಲ್ಲಿ, ನಾಳೆ ಮತ್ತು ನಾಳಿದ್ದು, ಘಾನಾಗೆ ಭೇಟಿ ನೀಡಲಿದ್ದಾರೆ. ಇದು ಘಾನಾಗೆ ಅವರ ಮೊದಲ ದ್ವಿಪಕ್ಷೀಯ ಭೇಟಿಯಾಗಿದೆ. ಭೇಟಿ ಸಮಯದಲ್ಲಿ ಪ್ರಧಾನಿಯವರು ಘಾನಾ ಅಧ್ಯಕ್ಷರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ವೇಳೆ, ಉಭಯ ರಾಷ್ಟ್ರಗಳ ನಡುವೆ ಇಂಧನ, ರಕ್ಷಣಾ ಸಹಯೋಗ, ಆರ್ಥಿಕ ಮತ್ತು ಅಭಿವೃದ್ಧಿ ಸಹಕಾರ ಪಾಲುದಾರಿಕೆಯನ್ನು ಹೆಚ್ಚಿಸುವ ಕುರಿತು ಚರ್ಚೆ ನಡೆಯುವ ಸಾಧ್ಯತೆಯಿದೆ.

**<><*<><>*><>**

ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಇಂದು ’ರೈಲ್ ಒನ್’ ಆಪ್ ಬಿಡುಗಡೆಗೊಳಿಸಿದರು. ಇದು ಎಲ್ಲಾ ರೈಲ್ವೆ ಪ್ರಯಾಣಿಕ ಸೇವೆಗಳಿಗೆ ಒಂದೇ ವೇದಿಕೆಯಾಗಿದೆ. ಟಿಕೆಟ್ ಬುಕ್ಕಿಂಗ್, ರೈಲುಗಳ ವಿಚಾರಣೆ, ಪಿಎನ್‌ಆರ್, ಪ್ರಯಾಣ ಯೋಜನೆ, ರೈಲ್ವೆ ತುರ್ತು ಸೇವೆಗಳು ಮತ್ತು ರೈಲಿನಲ್ಲಿ ಆಹಾರದಂತಹ ಸೇವೆಗಳಿಗೆ ಈ ಆಪ್ ಸುಲಭ ಪ್ರವೇಶ ನೀಡಲಿದೆ. ನವದೆಹಲಿಯಲ್ಲಿ ನಡೆದ ಸೆಂಟರ್ ಫಾರ್ ರೈಲ್ವೆ ಇನ್ಫಾರ್ಮೇಷನ್ ಸಿಸ್ಟಮ್ ಸಂಸ್ಥಾಪನ ದಿನ ಉದ್ದೇಶಿಸಿ ಮಾತನಾಡಿದ ಸಚಿವ ಅಶ್ವಿನಿ ವೈಷ್ಣವ್, ಪ್ರಯಾಣಿಕರು ’ರೈಲ್ ಒನ್’ ಆಪ್ ಮೂಲಕ ಕಾಯ್ದಿರಿಸಿದ ಟಿಕೆಟ್ ಬುಕ್ ಮಾಡಬಹುದು. ಅಲ್ಲದೆ, ಕಾಯ್ದಿರಿಸದ ಟಿಕೆಟ್ ಸಹ ಬುಕ್ ಮಾಡಬಹುದು ಎಂದು ತಿಳಿಸಿದರು. ’ರೈಲ್ ಒನ್’ ಆಪ್ ಅನ್ನು ಆಂಡ್ರಾಯ್ಡ್ ಪ್ಲೇ ಸ್ಟೋರ್ ಮತ್ತು ಐಒಎಸ್ ಆಪ್ ಸ್ಟೋರ್ ಎರಡರಲ್ಲೂ ಡೌನ್‌ಲೋಡ್ ಮಾಡಬಹುದು.

<><*<><>*><>

ತಮಿಳುನಾಡಿನ ವಿರುದುನಗರ್ ಜಿಲ್ಲೆಯ ಸಟ್ಟೂರಿನ ಪಟಾಕಿ ಕಾರ್ಖಾನೆಯಲ್ಲಿ ಇಂದು ಸಂಭವಿಸಿದ ಸ್ಫೋಟದಲ್ಲಿ ಕನಿಷ್ಠ ಎಂಟು ಕಾರ್ಮಿಕರು ಮೃತಪಟ್ಟಿದ್ದು, ಇತರೆ ಐವರು ಕಾರ್ಮಿಕರು ಗಾಯಗೊಂಡಿದ್ದಾರೆ. ಪಟಾಕಿ ಕಾರ್ಖಾನೆಯಲ್ಲಿ ೫೦ ಕ್ಕೂ ಹೆಚ್ಚು ಕಾರ್ಮಿಕರು ಕೆಲಸ ಮಾಡುತ್ತಿದ್ದರು. ೨೦ ಕೊಠಡಿಗಳ ಪೈಕಿ ಸ್ಫೋಟದಿಂದ ಐದು ಕೊಠಡಿಗಳಿಗೆ ಹಾನಿಯಾಗಿವೆ. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ಧಾವಿಸಿ, ಕಾರ್ಮಿಕರನ್ನು ರಕ್ಷಿಸಿದ್ದಾರೆ. ಗಾಯಗೊಂಡ ಕಾರ್ಮಿಕರನ್ನು ಚಿಕಿತ್ಸೆಗಾಗಿ ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಲಾಗಿದೆ. ಮೃತ ಕುಟುಂಬಗಳಿಗೆ ಸಂತಾಪ ಸೂಚಿಸಿರುವ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್, ಮೃತ ಕುಟುಂಬಗಳಿಗೆ ತಲಾ ೪ ಲಕ್ಷ ರೂಪಾಯಿ, ತೀವ್ರವಾಗಿ ಗಾಯಗೊಂಡವರಿಗೆ ತಲಾ ೧ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

<><*<><>*><>

ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯ ಪಶಮೈಲಾರಂನ ಔಷಧ ಕಾರ್ಖಾನೆಯಲ್ಲಿ ನಿನ್ನೆ ಸಂಭವಿಸಿದ ಸ್ಫೋಟದಲ್ಲಿ ಮೃತಪಟ್ಟವರ ಸಂಖ್ಯೆ ೩೬ ಕ್ಕೆ ಏರಿಕೆಯಾಗಿದೆ. ಘಟನೆಗೆ ಸಂಬಂಧಿಸಿದಂತೆ ಸಮಗ್ರ ತನಿಖೆಗೆ ಆದೇಶಿಸಿರುವ ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ, ಮೃತ ಕುಟುಂಬಗಳಿಗೆ ತಲಾ ಒಂದು ಕೋಟಿ ರೂಪಾಯಿ ಪರಿಹಾರ ಹಾಗೂ ಗಾಯಗೊಂಡವರಿಗೆ ತಲಾ ೧೦ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಇದುವರೆಗೆ ೧೧ ಮೃತದೇಹಗಳನ್ನು ಗುರುತಿಸಲಾಗಿದೆ. ಡಿಎನ್‌ಎ ಪರೀಕ್ಷೆಯ ಮೂಲಕ ಉಳಿದ ಮೃತದೇಹಗಳನ್ನು ಶೀಘ್ರ ಗುರುತಿಸುವಂತೆ ತೆಲಂಗಾಣ ಸರ್ಕಾರ ಆದೇಶಿಸಿದೆ. ಕಾರ್ಖಾನೆಯಲ್ಲಿ ನಿನ್ನೆ ಸಂಭವಿಸಿದ ಸ್ಫೋಟದ ಸಮಯದಲ್ಲಿ ಸುಮಾರು ೧೪೩ ಕಾರ್ಮಿಕರು ಪಾಳಿಯಲ್ಲಿ ಕೆಲಸ ಮಾಡುತ್ತಿದ್ದರು.

<><*<><>*><>

ಕಳೆದ ೨೫ ವರ್ಷಗಳ ಅವಧಿಯಲ್ಲಿ ಭಾರತ ಮತ್ತು ಅಮೆರಿಕ ನಡುವಿನ ಸಂಬಂಧ ಬಲವಾಗಿದ್ದು, ಸಕಾರಾತ್ಮಕ ಬೆಳವಣಿಗೆ ಕಾಣುತ್ತಿದೆ ಎಂದು ಕೇಂದ್ರ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.  ಕ್ವಾಡ್ ವಿದೇಶಾಂಗ ಸಚಿವರ ಸಭೆಗಾಗಿ ಅಮೆರಿಕದ ವಾಷಿಂಗ್ಟನ್‌ಗೆ ಇಂದು ಆಗಮಿಸಿದ ನಂತರ ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಉಭಯ ದೇಶಗಳ ನಡುವಿನ ವ್ಯಾಪಾರ ಸಂಬಂಧವನ್ನು ಶ್ಲಾಘಿಸಿದರು. ಅರ್ಥಶಾಸ್ತ್ರ, ತಂತ್ರಜ್ಞಾನ, ಶಿಕ್ಷಣ, ಭದ್ರತೆ ಮತ್ತು ಇಂಧನ ಕ್ಷೇತ್ರದಲ್ಲಿ ಎರಡು ದೇಶಗಳ ನಡುವಿನ ಸಂಬಂಧ ಇತ್ತೀಚಿನ ವರ್ಷಗಳಲ್ಲಿ ಗಣನೀಯವಾಗಿ ವೃದ್ಧಿಯಾಗುತ್ತಿದೆ ಎಂದರು. ಭಾರತ ಮತ್ತು ಅಮೆರಿಕ ನಡುವೆ ಕೆಲವು ಸವಾಲುಗಳು ಸಂಕೀರ್ಣವಾಗಿದ್ದು, ಅವುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕ್ರಮ ತೆಗೆದುಕೊಳ್ಳಲಾಗುತ್ತಿದೆ ಎಂದ ಸಚಿವರು, ಉಭಯ ದೇಶಗಳ ನಡುವಿನ ವ್ಯಾಪಾರ ಮಾತುಕತೆಗಳು ಯಶಸ್ವಿಯಾಗಿ ಬಗೆಹರಿಯಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

<><*<><>*><>

ಪಂಜಾಬ್‌ನ ಆರು ವರ್ಷದ ಬಾಲಕ ತೇಗ್‌ಬೀರ್ ಸಿಂಗ್, ಮೌಂಟ್ ಎಲ್‌ಬ್ರೂ ಏರಿದ ಅತ್ಯಂತ ಕಿರಿಯ ಪರ್ವತಾರೋಹಿ ಎಂಬ ವಿಶ್ವ ದಾಖಲೆಯನ್ನು ನಿರ್ಮಿಸಿದ್ದಾನೆ. ಮೌಂಟ್ ಎಲ್‌ಬ್ರೂ- ರಷ್ಯಾ ಮತ್ತು ಯುರೋಪಿನ ಅತಿ ಎತ್ತರದ ಪರ್ವತವಾಗಿದ್ದು, ೧೮ ಸಾವಿರದ ೫೧೦ ಅಡಿ ಎತ್ತರವಿದೆ.  ತೇಗ್‌ಬೀರ್ ಜೂನ್ ೨೦ ರಂದು ತಮ್ಮ ತಂದೆ ಸುಖಿಂದರ್‌ದೀಪ್ ಸಿಂಗ್ ಅವರೊಂದಿಗೆ ಚಾರಣವನ್ನು ಪ್ರಾರಂಭಿಸಿ, ಜೂನ್ ೨೮ ರಂದು ಎಲ್‌ಬ್ರೂ ಶಿಖರವನ್ನು ತಲುಪಿದರು.

<><*<><>*><>

ತಾಷ್ಕೆಂಟ್‌ನಲ್ಲಿ ನಡೆದ ೨೯ನೇ ಏಷ್ಯನ್ ಯೂತ್ ಚಾಂಪಿಯನ್‌ಶಿಪ್ ಟೇಬಲ್ ಟೆನಿಸ್ ಸ್ಪರ್ಧೆಯ ೧೫ ವರ್ಷದೊಳಗಿನ ಬಾಲಕಿಯರ ಸಿಂಗಲ್ಸ್‌ನಲ್ಲಿ ಭಾರತದ ದಿವ್ಯಾಂಶಿ ಭೌಮಿಕ್ ಚಿನ್ನ ಗೆದ್ದಿದ್ದಾರೆ. ಫೈನಲ್‌ನಲ್ಲಿ ಅವರು ಚೀನಾದ ಝು ಕಿಹಿ ಅವರನ್ನು ೪-೨ ಅಂತರದಿಂದ ಸೋಲಿಸಿದರು. ಏತನ್ಮಧ್ಯೆ, ಅಗ್ರ ಶ್ರೇಯಾಂಕಿತ ಅಂಕುರ್ ಭಟ್ಟಾಚಾರ್ಯ ಮತ್ತು ಪಿ.ಬಿ. ಅಭಿನಂದ್ ಸೋತು, ೧೯ ವರ್ಷದೊಳಗಿನ ಬಾಲಕರ ಡಬಲ್ಸ್‌ನಿಂದ ನಿರ್ಗಮಿಸಿದರು. ಭಾರತವು ಒಂದು ಚಿನ್ನ, ಒಂದು ಬೆಳ್ಳಿ ಮತ್ತು ಎರಡು ಕಂಚಿನ ಪದಕಗಳೊಂದಿಗೆ ಪಂದ್ಯಾವಳಿಯನ್ನು ಕೊನೆಗೊಳಿಸಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್, ೯೧ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೮೩ ಸಾವಿರದ ೬೯೭ ಅಂಕಗಳು ದಾಖಲಾಗಿದೆ. ಇದೇ ವೇಳೆ, ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ, ೨೫ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೫ ಸಾವಿರದ ೫೪೨ ಅಂಕಗಳು ದಾಖಲಾಗಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>